**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ರವರು ನಿಯಮ-72ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ**

**ವಿಷಯ:**

**1992ರ ನಂತರ ಅನುದಾನಿತ ಶಾಲಾ ಕಾಲೇಜುಗಳಲ್ಲಿ ನೇಮಕವಾಗಿ ಕೆಲಸ ಮಾಡುತ್ತಿರುವ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ಕಾಲ್ಪನಿಕ ವೇತನ ಬಡ್ತಿಯನ್ನು ಮಂಜೂರು ಮಾಡುವ ಬಗ್ಗೆ ಹಲವಾರು ಬಾರಿ ಸದನದಲ್ಲಿ ಚರ್ಚೆಯಾಗಿ ಬಸವರಾಜ ಹೊರಟ್ಟಿಯವರ ಅಧ್ಯಕ್ಷತೆಯ ಸಮಿತಿಯನ್ನು ರಚನೆ ಮಾಡಿ ವರದಿಯನ್ನು ಪಡೆಯಲಾಗಿದೆ. ಆದರೆ ಇದುವರೆಗೆ ಕಾಲ್ಪನಿಕ ವೇತನ ಬಡ್ತಿಯನ್ನು ಮಂಜೂರು ಮಾಡದೆ ಇರುವುದರಿಂದ ಸಾವಿರಾರು ಶಿಕ್ಷಕರಿಗೆ ಆಗುತ್ತಿರುವ ಅನ್ಯಾಯದ ಬಗ್ಗೆ ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ಶ್ರೀ ಬಸವರಾಜ ಹೊರಟ್ಟಿ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ದಿನಾಂಕ: 25.09.2014ರಂದು ರಚಿಸಲಾಗಿತ್ತು. ಆರ್ಥಿಕ ಪರಿಣಾಮಗಳನ್ನು ಕರಾರುವಕ್ಕಾಗಿ ನಿರ್ಣಯಿಸುವ ಸಲುವಾಗಿ ಈ ಸಮಿತಿಯನ್ನು ಪುನರುಜ್ಜೀವನಗೊಳಿಸಿ ದಿನಾಂಕ :11-07-2017ರಂದು ವಿಶೇಷ ಸದನ ಸಮಿತಿಯನ್ನು ಪುನರ್ ರಚಿಸಲಾಗಿದೆ. ಸದರಿ ಸಮಿತಿಯು ದಿನಾಂಕ:17-03-2015ಮತ್ತು 06.02.2018ರಂದು ಎರಡು ವರದಿಗಳನ್ನು ಸಲ್ಲಿಸಿರುತ್ತಾರೆ. ವರದಿಯಲ್ಲಿನ ಶಿಫಾರಸ್ಸುಗಳು ಸರ್ಕಾರದ ಗಮನಕ್ಕೆ ಬಂದಿರುತ್ತವೆ.

ಅನುದಾನ ಸಂಹಿತೆಯ ಪ್ರಕಾರ ಅನುದಾನಕ್ಕೊಳಪಟ್ಟ ಸಿಬ್ಬಂದಿಗೆ ಅನುದಾನ ದೊರೆತ ದಿನಾಂಕದಿಂದ ಮಾತ್ರ ಕನಿಷ್ಟ ವೇತನ ನಿಗದಿ ಮಾಡಬೇಕೆಂದು. ಹಿಂದಿನ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಕ್ಕೆ ಪರಿಗಣಿಸುವಂತಿಲ್ಲ. ಈ ಸಂಬಂಧ ಸರ್ಕಾರವು ದಿನಾಂಕ:01-06-1995 ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂಧಿಗಳ (ವೇತನ. ನಿವೃತ್ತಿ ವೇತನ ಮತ್ತು ಇತರೇ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಜಾರಿಗೆ ತರಲಾಗಿದೆ.

ಈ ಅಧಿನಿಯಮವನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಪ್ರಶ್ನಿಸಿರುವ ರಿಟ್ ಅರ್ಜಿಗಳಾದ 21216/2014 ಮತ್ತು 14307/2014 ಮತ್ತು ತತ್ಸಂಬಂಧದ ಪ್ರಕರಣಗಳಲ್ಲಿ ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:10-07-2015ರಂದು ನೀಡಿದ ತೀರ್ಪಿನಲ್ಲಿ ಸದರಿ ಅಧಿನಿಯಮವನ್ನು "struck down " ಮಾಡಿರುತ್ತದೆ.

ಮೇಲಿನ ಮಾನ್ಯ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಚನ್ಯಾಯಾಲಯ , ಬೆಂಗಳೂರು ಇಲ್ಲಿ ರಿಟ್ ಅಪೀಲ್ ಸಂಖ್ಯೆ:2476/2015 ಮತ್ತು 2467/2015ನ್ನು ದಾಖಲಿಸಿದೆ. ಮೇಲಿನ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪಿಗೆ ದಿನಾಂಕ:27-11-2015ರಂದು ತಡೆಯಾಜ್ಞೆ ನೀಡಿರುತ್ತದೆ.ಸದರಿ ತಡೆಯಾಜ್ಞೆಯು ಪ್ರಸ್ತುತ ಜಾರಿಯಲ್ಲಿದ್ದು. ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ಬಾಕಿಯಿರುತ್ತದೆ.

ಕರ್ನಾಟಕ ಶಿಕ್ಷಣ ಸಂಸ್ಥೆಗಳು ( ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-II (3) ರನ್ವಯ ಹಿಂದಿನ ಅನುದಾನರಹಿತ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಕ್ಕೆ ಪರಿಗಣಿಸುವಂತಿಲ್ಲ. ಅನುದಾನಕೊಳಪಟ್ಟ ಸಿಬ್ಬಂದಿಗಳಿಗೆ ಅನುದಾನ ದೊರೆತ ದಿನಾಂಕದಿಂದ ಕನಿಷ್ಠ ವೇತನ ನಿಗದಿ ಮಾಡಿ , ವೇತನವನ್ನು ವಿತರಿಸುತ್ತಿರುವುದರಿಂದ ಅನುದಾನಿತ ಶಿಕ್ಷಕರಿಗೆ ಯಾವುದೇ ಅನ್ಯಾಯವಾಗಿರುವುದಿಲ್ಲ.

ಸಂಖ್ಯೆ:ಇಪಿ74ಎಸ್ಇಎಸ್ 2020

**(ಎಸ್. ಸುರೇಶ್ ಕುಮಾರ್ )**
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ
ಸಕಾಲ ಸಚಿವರು